**MAY 25,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ಆಪರೇಶನ್ ಸಿಂಧೂರ' ಕಾರ್ಯಾಚರಣೆಯಲ್ಲಿ ಸೇನಾಪಡೆಗಳು ಪ್ರದರ್ಶಿಸಿದ ಶೌರ್ಯ ಪ್ರತಿಯೊಬ್ಬ ಭಾರತೀಯನನ್ನೂ ಹೆಮ್ಮೆಪಡುವಂತೆ ಮಾಡಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಹೇಳಿದರು. ಆಕಾಶವಾಣಿಯ ಜನಪ್ರಿಯ 'ಮನ ಕಿ ಬಾತ್' ಕಾರ್ಯಕ್ರಮದ 122 ನೇ ಆವೃತ್ತಿಯಲ್ಲಿ ದೇಶ ವಿದೇಶಗಳಲ್ಲಿರುವ ಭಾರತೀಯರನ್ನು ಉದ್ದೇಶಿಸಿ ಮಾತನಾಡಿದ ಅವರು, ಗಡಿಯಾಚೆಗಿನ ಭಯೋತ್ಪಾದಕರ ಅಡಗುತಾಣಗಳನ್ನು ನಮ್ಮ ಪಡೆಗಳು ನಿಖರತೆಯಿಂದ ನಾಶಪಡಿಸಿವೆ. ಆಪರೇಶನ್ ಸಿಂಧೂರ ಪ್ರಚಂಚದಾದ್ಯಂತ ಭಯೋತ್ಪಾದನೆಯ ವಿರುದ್ಧದ ಹೋರಾಟಕ್ಕೆ ಹೊಸ ಭರವಸೆ ನೀಡಿದೆ ಎಂದರು.

<><><>

ಅಂತಾರಾಷ್ಟ್ರೀಯ ಯೋಗ ದಿನದ ಬಗ್ಗೆ ಉಲ್ಲೇಖಿಸಿದ ಪ್ರಧಾನಮಂತ್ರಿ ಅವರು, ಜೂನ್ 21, 2015 ರಂದು 'ಯೋಗ ದಿನ' ಆರಂಭವಾದಾಗಿನಿಂದ, ಅದರ ಆಕರ್ಷಣೆ ನಿರಂತರವಾಗಿ ವೃದ್ಧಿಸುತ್ತಿದೆ. ವಿಶ್ವಾದ್ಯಂತ ಜನರ ಉತ್ಸಾಹ ಹಾಗೂ ಹುಮ್ಮಸ್ಸು ಕಂಡುಬರುತ್ತಿದೆ. ಯೋಗಾಭ್ಯಾಸದಿಂದ ದೂರವಿದ್ದವರು ಯೋಗಾಭ್ಯಾಸವನ್ನು ಆರಂಭಿಸಿ ಎಂದು ಸಲಹೆ ನೀಡಿದರು.

<><><>

ಉತ್ತರ ಕನ್ನಡ ಜಿಲ್ಲೆಯಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನೆಲೆ, ಮುಂದಿನ ಮೂರು ದಿನಗಳ ಕಾಲ ರೆಡ್ ಅಲರ್ಟ್ ಘೋಷಿಸಲಾಗಿದೆ. ಜಿಲ್ಲೆಯಾದ್ಯಂತ ಪ್ರವಾಹಕ್ಕೆ ತುತ್ತಾಗಬಹುದಾದ ಪ್ರದೇಶಗಳನ್ನು ಈಗಾಗಲೇ ಗುರುತಿಸಲಾಗಿದ್ದು ಮುಂಜಾಗ್ರತೆ ವಹಿಸಲಾಗಿದೆ. ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸಹಾಯವಾಣಿಯನ್ನು ಆರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ಮಾಹಿತಿ ನೀಡಿದರು.

<><><>

ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆ ಮುಂದುವರೆದಿದ್ದು ಜನ ಜೀವನ ವ್ಯತ್ಯಯವಾಗಿದೆ. ತಲಕಾವೇರಿ, ಭಾಗಮಂಡಲ, ಮಡಿಕೇರಿ ಸೇರಿದಂತೆ ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಭಾರಿ ಮಳೆಯಗುತ್ತಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ವಿರಾಜಪೇಟೆ ಹೋಬಳಿ ಅರ್ಜಿ ಗ್ರಾಮದಲ್ಲಿ ಮನೆಯೊಂದರ ಮೇಲೆ ಮರದ ಬಿದ್ದ ಪರಿಣಾಮ, 50 ವರ್ಷದ ಗೌರಿ ಎಂಬವರು ಮೃತಪಟ್ಟ ದುರ್ಘಟನೆ ನಡೆದಿದೆ.

<><><>

ಮೈಸೂರು ಜಿಲ್ಲೆ, ಹಿನಕಲ್, ತಮಗೆ ರಾಜಕೀಯವಾಗಿ ಶಕ್ತಿ ಕೊಟ್ಟ ಗ್ರಾಮ. ಹಂತ ಹಂತವಾಗಿ, ಹಿನಕಲ್ ನ ಸಂಪೂರ್ಣ ಅಭಿವೃದ್ಧಿಗೆ ತಾವು ಬದ್ಧ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಹಿನಕಲ್‌ನಲ್ಲಿ 9 ಇಂದಿರಾ ಕ್ಯಾಂಟೀನ್‌ಗಳನ್ನು ಉದ್ಘಾಟಿಸಿ ಅವರು, ಮಾತನಾಡಿದರು. ರಾಜ್ಯದಲ್ಲಿ, ಹೊಸದಾಗಿ ಇನ್ನೂ 184 ಇಂದಿರಾ ಕ್ಯಾಂಟೀನ್‌ಗಳನ್ನು ಆರಂಭಿಸುತ್ತಿದ್ದೇವೆ ಎಂದು, ಮುಖ್ಯಮಂತ್ರಿ ನುಡಿದರು.

<><><>

ಕನ್ನಡದ ಪ್ರಾತಿನಿಧಿಕ ಸಂಸ್ಥೆ, ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ನೂತನ ಪದಾಧಿಕಾರಿಗಳ ಆಯ್ಕೆಗಾಗಿ ಇಂದು ಚುನಾವಣೆ ಆಯೋಜಿತವಾಗಿದೆ. ಬೆಳಗ್ಗೆ 7 ಗಂಟೆಯಿಂದ ಮತದಾನ ಪ್ರಕ್ರಿಯೆ ಆರಂಭಗೊಂಡಿದ್ದು, ಸಂಜೆ 5 ರ ವರೆಗೆ ನಡೆಯಲಿದೆ.

<><><>

ಬೀದರ ಬಸವಕಲ್ಯಾಣ ತಾಲ್ಲೂಕಿನಲ್ಲಿ ಪ್ರಸಕ್ತ ವರ್ಷದ ಮುಂಗಾರು ಹಂಗಾಮಿಗೆ, ಬಿತ್ತನೆ ಬೀಜಗಳನ್ನು ರೈತರಿಗೆ ರಿಯಾಯಿತಿ ದರದಲ್ಲಿ ನೀಡಲು ಸಿದ್ಧತೆ ನಡೆದಿದ್ದು, ನಾಳೆ ಶಾಸಕ ಶರಣು ಸಲಗರ ಅವರು ಚಾಲನೆ ನೀಡಲಿದ್ದಾರೆಂದು ತಾಲೂಕು ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>